# ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಬೇಲೂರು.

**ಸಿ ಸಿ ನಂಃ 398/2018**

| | | | |
|---|---|---|---|
| ಹೆಸರು | ದೀಕ್ಷಿತ್ | ದಿಃ 18-08-2022 | |
| ತಂದೆ ಹೆಸರು | ಪುಟ್ಟಸ್ವಾಮಿಗೌಡ | | |
| ವಯಸ್ಸು | 28 ವರ್ಷ | | ಪಿಡಬ್ಲ್ಯುಃ 1 |
| ಉದ್ಯೋಗ | ವ್ಯವಸಾಯ | | ಸಿಡಬ್ಲ್ಯುಃ 1 |
| ವಾಸ | ಅಡಮನಹಳ್ಳಿ. | | ವಿಧಿ ಬದ್ಧವಾಗಿ ಪ್ರಮಾಣೀಕರಿಸಲಾಯಿತು. |

## ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನನಗೆ ನ್ಯಾಯಾಲಯದಲ್ಲಿ ಹಾಜರಿರುವ 1 ನೇ ಆರೋಪಿಯ ಪರಿಚಯ ಇರುತ್ತದೆ.

ನನಗೆ ಚಾಸಾ-2 ರವರ ಪರಿಚಯ ಇರುವುದಿಲ್ಲ.

ಈಗ ತೋರಿಸಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸದರಿ ದಾಖಲೆ ಕೃತ್ಯ ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿಪಿ-1 ಎಂದು ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರ್ತಿಸಲಾಯಿತು.

ಈಗ ತೋರಿಸಿರುವ ಮತ್ತೊಂದು ದಾಖಲೆಯನ್ನು ತೋರಿದ್ದು ಸದರಿ ದಾಖಲೆ ಮಾದರಿ ಸೀಲಿನ ನಕಲು ಆಗಿದ್ದು ಅದನ್ನು ನಿಪಿ-2 ಎಂದು ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರ್ತಿಸಲಾಯಿತು.

ನಿಪಿ-1 ಮತ್ತು 2 ರಲ್ಲಿರುವ ಸಹಿಗಳನ್ನು ಯಾವ ದಿನಾಂಕದಂದು ಮಾಡಿರುತ್ತೇನೆ ಎಂದು ನೆನಪಿರುವುದಿಲ್ಲ. ಸಹಿಗಳನ್ನು ಬೇಲೂರಿನ ಅಬಕಾರಿ ಕಚೇರಿಯಲ್ಲಿ ಮಾಡಿರುತ್ತೇನೆ.

ನಿಪಿ-1 ಮತ್ತು 2 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈಗ ತೋರಿಸಿದ ಎರಡು ಪ್ಲಾಸ್ಟಿಕ್ ಬಾಟಲ್ ಗಳನ್ನು ನೋಡಿ ಗುರ್ತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು.)

## ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ದಿಃ 07-10-2017 ರಂದು ಮಧ್ಯಾಹ್ನ 2.00 ರ ಸಮಯದಲ್ಲಿ ಅಬಕಾರಿ ನಿರೀಕ್ಷಕರು, ಸಿಬ್ಬಂದಿಯೊಂದಿಗೆ ಅಡಮನಹಳ್ಳಿ ಗ್ರಾಮಕ್ಕೆ ಬಂದು ಅಲ್ಲೆ ಇದ್ದ ನನ್ನನ್ನು ಮತ್ತು ಚಾಸಾ-2 ರವರನ್ನು ಕರೆದು ಬಂದ ಮಾಹಿತಿಯನ್ನು ತಿಳಿಸಿ ದಾಳಿ ಸಮಯದಲ್ಲಿ ಪಂಚರನ್ನಾಗಿ ಸಹಕರಿಸಲು ಕೋರಿದ್ದು ಅದಕ್ಕೆ ನಾವು ಒಪ್ಪಿ ಆರೋಪಿ ಮನೆಯ ಹತ್ತಿರ ಹೋಗಿ ಮನೆಯ ಬಾಗಿಲ ತೆರೆದಿದ್ದು ಮನೆಯಲ್ಲಿ ಯಾರು ಇಲ್ಲದ ಕಾರಣ ಅಕ್ಕಪಕ್ಕದವರನ್ನು ವಿಚಾರಿಸಿದಾಗ ಮನೆಯು ಆರೋಪಿಗೆ ಸೇರಿದ್ದು ಎಂದು ತಿಳಿಸಿದರು ಎಂದರೆ ಸರಿಯಲ್ಲ. ಸ್ಥಳದಲ್ಲಿ ಶೋಧನಾ ಸಮುಚಿತ ಆಧಾರವನ್ನು ತಯಾರಿಸಿ ಮನೆಯ ಸುತ್ತಮುತ್ತ ಶೋಧನೆ ಮಾಡಿದಾಗ ಮನೆಗೆ ಹೊಂದಿಕೊಂಡಿರುವ ಬಚ್ಚಲು ಮನೆಯಲ್ಲಿ 15 ಲೀ ಸಾಮರ್ಥ್ಯದ 1 ಪ್ಲಾಸ್ಟಿಕ್ ಕೊಡದಲ್ಲಿ 15 ಲೀಟರ್ ಬೆಲ್ಲದ ಕೊಳೆ ಹಾಗೂ 5 ಲೀ ಸಾಮರ್ಥ್ಯದ ಒಂದು ಪ್ಲಾಸ್ಟಿಕ್

ಕ್ಯಾನ್ ನಲ್ಲಿ  5 ಲೀ ನಷ್ಟು ಕಳ್ಳಭಟ್ಟಿ ಸರಾಯಿ ಇರುವುದು ಕಂಡುಬಂತು ಎಂದರೆ ಸರಿಯಲ್ಲ. ದೊರೆತ ವಸ್ತುಗಳಿಂದ  ಎಫ್ ಎಸ್ ಎಲ್ ಗಾಗಿ 500 ಎಂ ಎಲ್ ನ ಒಂದು ಪ್ಲಾಸ್ಟಿಕ್ ಬಾಟಲಿಯಲ್ಲಿ 500 ಎಂ ಎಲ್ ನಷ್ಟು ಬೆಲ್ಲದ ಕೊಳೆ ಹಾಗೂ 500 ಎಂ ಎಲ್ ಸಾಮರ್ಥ್ಯದ ಮತ್ತೊಂದು ಬಾಟಲಿಯಲ್ಲಿ 500 ಎಂ ಎಲ್ ನಷ್ಟು ಕಳ್ಳಭಟ್ಟಿ ಸಾರಾಯಿಯನ್ನು ಮಾದರಿಗೆ ತೆಗೆದು ಬಟ್ಟೆಯಿಂದ ಸುತ್ತಿ ದಾರದಿಂದ ಕಟ್ಟಿ ನಮ್ಮ ಸಹಿ ಇರುವ ಚೀಟಿಯನ್ನು ಅಂಟಿಸಿ ಇಲಾಖಾ ಸೀಲು ಹಾಕಲಾಯಿತು ಎಂದರೆ ಸರಿಯಲ್ಲ. ನಂತರ ಹಾಜರಿದ್ದ ಅಕ್ಕಪಕ್ಕದವರ ಮನೆಯವರನ್ನು ಆರೋಪಿಯ ಬಗ್ಗೆ ವಿಚಾರಿಸಲಾಗಿ ಆರೋಪಿಯ ಹೆಸರು ದಾಕ್ಷಾಯಿಣಿ ಕೋಂ ಹುಚ್ಚೇಗೌಡ, ಅಡುಮನಹಳ್ಳಿ ಗ್ರಾಮ ಎಂದು ತಿಳಿಸಿದರು ಎಂದರೆ ಸರಿಯಲ್ಲ. ನಂತರ ದೊರೆತ ಸ್ವತ್ತುಗಳನ್ನು ನನ್ನ ಹಾಗೂ ಚಾಸಾ-2 ರವರ ಸಮಕ್ಷಮ ಮಧ್ಯಾಹ್ನ 2.15 ರಿಂದ 3.30 ರವರೆಗೆ ನಿಪಿ-1 ರಂತೆ ಮಹಜರ್  ಮೂಲಕ ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ನಿಪಿ-1 ಮತ್ತು 2 ಕ್ಕೆ ನಾನು ಸ್ಥಳದಲ್ಲೆ ಓದಿ ನೋಡಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಯು ನಮ್ಮ ಊರಿನವರೆ ಆದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ/ಗಳ ಪರ ವಕೀಲರಾದ ಶ್ರೀ ಸಿ ಎಂ ಪಿ ರವರಿಂದಃ</u>**

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸುತ್ತಾರೆ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)**

**ಓ. ಹೇ. ಕೇ. ಸರಿ. ಇದೆ**

**(ಪ್ರಸನ್ನಕುಮಾರ್ ಸಿ.)**
**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.**
**ಬೇಲೂರು.**